ಅಟಲ್‌ಜಿ ಜನಸ್ನೇಹಿ ಕೇಂದ್ರ

226(292); ಡಾ: ಉಮೇಶ್ ಜಿ. ಜಾಧವ್ (ಚಿಂಚೋಳಿ)

ಅ) ಗುಲ್ಬರ್ಗಾ ಜಿಲ್ಲೆಯ ಚಿಂಚೋಳಿ ತಾಲ್ಲೂಕಿನ ಚಿಮ್ಮನಚೋಡದಲ್ಲಿ ಅಟಲ್‌ಜಿ ಜನಸ್ನೇಹಿ ಕೇಂದ್ರ ಇಲ್ಲದೆ ಇರುವುದರಿಂದ ಸಾರ್ವಜನಿಕರಿಗೆ ಅಗತ್ಯವಾದ ಸೇವೆಗಳನ್ನು ಹೋಬಳಿ ಮಟ್ಟದಲ್ಲಿ ಜನರಿಗೆ ನೀಡಲು ಸಾಧ್ಯವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು (ವಿವರ ನೀಡುವುದು)

ಇ) ಅಟಲ್‌ಜಿ ಜನಸ್ನೇಹಿ ಕೇಂದ್ರಗಳನ್ನು ತರೆಯಲು ಸರ್ಕಾರವು ಅನುರಿಸುತ್ತಿರುವ ಮಾನದಂಡಗಳೇನು?

ಶ್ರೀ. ವಿ ಶ್ರೀನಿವಾಸ್ ಪ್ರಸಾದ್ (ಮಾನ್ಯ ಕಂದಾಯ ಸಚಿವರು)

ಅ) ಚಿಂಚೋಳಿ ತಾಲ್ಲೂಕಿನ ಚಿಮ್ಮನಚೋಡ ಗ್ರಾಮವು ಐನಾಪುರ ಹೋಬಳಿ ವ್ಯಾಪ್ತಿಗೆ ಬರುತ್ತದೆ. ಸದರಿ ಗ್ರಾಮವಯ ಐನಾಪುರ ಹೋಬಳಿಗೆ 20 ಕಿ.ಮೀ ಅಂತರದಅಲ್ಲಿರುತ್ತದೆ. ಈಗಾಗಲೇ ಐನಾಪುರ ಹೋಬಳಿಯಲ್ಲಿ ಅಟಲ್‌ಜಿ ಜನಸ್ನೇಹಿ ಕೇಂದ್ರ ಕಾರ್ಯನಿರ್ವಹಿಸುತ್ತಿದ್ದು ಸದರಿ ಕೇಂದ್ರದಲ್ಲಿ ಸಾರ್ವಜನಿಕರಿಗೆ ಸೇವೆಯನ್ನು ನೀಡಲಾಗುತ್ತಿದೆ ಹಾಗೂ ಸದರಿ ಕೇಂದ್ರದಲ್ಲಿ ಪ್ರತಿ ದಿನಕ್ಕೆ ಸರಾಸರಿ 47 ಅರ್ಜಿಗಳು ಸ್ವೀಕೃತವಾಗುತ್ತಿವೆ.

ಆ) ಈಗಾಗಲೇ ಐನಾಪುರ ಗ್ರಾಮದಲ್ಲಿ ಅಟಲ್‌ಜಿ ಜನಸ್ನೇಹಿ ಕೇಂದ್ರ ಸ್ಥಾಪನೆಯಾಗಿರುತ್ತದೆ. ಹಾಗೂ ಈ ಗ್ರಾಮದಲ್ಲಿ ಹೆಚ್ಚುವರಿ ಫ್ರಂಟ್ ಆಫೀಸ್ ಸ್ಥಾಪನೆಗೆ ಯಾವುದೇ ಪ್ರಸ್ತಾವನೆ ಬಂದಿರುವುದಿಲ್ಲ.

ಇ) ಸರ್ಕಾರದಿಂದ 777 ಅಟಲ್‌ಜಿ ಜನಸ್ನೇಹಿ ಕೇಂದ್ರಗಳು ಹಾಗೂ 114 ಫ್ರಂಟ್ ಆಫೀಸ್‌ಗಳು ಸ್ಥಾಪನೆಯಾಗಿರುತ್ತವೆ. ನಾಡಕಛೇರಿಗಳಲ್ಲಿ

100 ಕ್ಕಿಂತ ಹೆಚ್ಚು ಅರ್ಜಿಗಳು ಸ್ವೀಕೃತವಾಗುವಂತಹ ಗ್ರಾಮಗಳಲ್ಲಿ ಹಾಗೂ ಗ್ರಾಮಸ್ಥರು ದೂರದ ಹಳ್ಳಿಗಳಿಂದ ಅರ್ಜಿ ಸಲ್ಲಿಸಲು ನಾಡಕಛೇರಿಗಳಿಗೆ ಬರಬೇಕಾಗುವಂತಹ ಸಂದರ್ಭದಲ್ಲಿ ಹೊಸದಾಗಿ ಅಟಲ್‌ಜಿ ಜನಸ್ನೇಹಿ ಕೇಂದ್ರಗಳನ್ನು ತೆರೆಯಲು ಸರ್ಕಾರದಿಂದ ಅನುಮೋದನೆ ನೀಡಲಾಗುತ್ತಿತ್ತು.

ಇನ್ನು ಮುಂದೆ ಯಾವುದೇ ನಾಡಕಛೇರಿಯನ್ನು ತೆರಯಬಾರದೆಂದು ಆರ್ಥಿಕ ಇಲಾಖೆಯಿಂದ ಅಭಿಪ್ರಾಯ ವ್ಯಕ್ತವಾಗಿರುತ್ತದೆ ಹಾಗೂ ಈಗಾಗಲೇ ಎ-ಗವರ್ನೆನ್ಸ್ ಇಲಾಖೆಯಿಂದ ಗ್ರಾಮಪಂಚಾಯಿತಿ ಮಟ್ಟದಲ್ಲಿ ಸಾಮಾನ್ಯ ಸೇವಾಕೇಂದ್ರಗಳನ್ನು ತೆರೆಯಲು ಕ್ರಮವಹಿಸ ಲಾಗುತ್ತಿದ್ದು ಈ ಕೇಂದ್ರಗಳಲ್ಲೂ ಸಹಾ ಅಟಲ್‌ಜಿ ಜನಸ್ನೇಹಿ ಕೇಂದ್ರದ ಸೇವೆಯನ್ನು ನೀಡಲಾಗುತ್ತದೆ.

ಕಾಲುವೆಗಳ ದುರಸ್ತಿ

227(294); ಡಾ: ಉಮೇಶ್ ಜಿ. ಜಾಧವ್

ಅ) ಚಂದ್ರಂಪಳ್ಳಿ ಬಲದಂಡೆ ಮತ್ತು ಎಡದಂಡೆ ಕಾಲುವೆಗಳಿಂದ, ಮುಲ್ಲಾಮಾರಿ ಕೆಳದಂಡೆ ಯೋಜನೆಯ ಕಾಲುವೆಗಳ ರೈತರ ಜಮೀನುಗಳಿಗೆ ನೀರು ಪೂರೈಕೆ ಮಾಡುವ ಕಾರ್ಯ ಯಶಸ್ವಿಯಾಗಿದೆಯೇ;

ಆ) ಮುಖ್ಯ ಕಾಲುವೆಗಳು ಹಾಗೂ ಉಪ ಕಾಲುವೆಗಳೂ ಸಂಪೂರ್ಣವಾಗಿ ಹಾಳಾಗಿದ್ದು, ರೈತರ ಜಮೀನುಗಳಿಗೆ ನೀರು ಪೂರೈಕೆಯಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಕಳೆದ ಮೂರು ವರ್ಷಗಳಲ್ಲಿ ಚಿಂಚೋಳಿ ವಿಧಾನಸಭಾ ಕ್ಷೇತ್ರಕ್ಕೆ ಭಾರೀ ಮತ್ತು ಮಧ್ಯಮ ನೀರಾವರಿ ಇಲಾಖೆಯಿಂದ ವಿವಿಧ